ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಚಾಮರಾಜನಗರದಲ್ಲಿ ಬಸ್ ತಂಗುದಾಣಗಳನ್ನು ನಿರ್ಮಿಸುವ ಬಗ್ಗೆ

ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

564 (567) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಾಮರಾಜನಗರದಲ್ಲಿ ಸಂತೇಮರಹಳ್ಳಿ ಗುಂಡ್ಲುಪೇಟೆ ವೃತ್ತ, ಜಿಲ್ಲಾ ಆಸ್ಪತ್ರೆ ಎದುರು, ಲಾರಿ ನಿಲ್ದಾಣದ ಬಳಿ ಅಪಾರ ಸಂಖ್ಯೆಯ ಜನರು ಬಸ್‌ಗಳನ್ನು ಹತ್ತಲು, ಬಿಸಿಲು ಮಳೆಯಲ್ಲಿ ಕಾಯುತ್ತಾ ನಿಂತುಕೊಳ್ಳಬೇಕಾದ ಪರಿಸ್ಥಿತಿ ಇದ್ದು, ಜನರಿಗೆ ಅನಾನುಕೂಲ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಮೇಲ್ಕಂಡ ಸ್ಥಳಗಳಲ್ಲಿ ಬಸ್‌ಗಾಗಿ ನಿರೀಕ್ಷಿಸುತ್ತಾ ನಿಲ್ಲುವ ಜನರಿಗೆ ಕುಳಿತುಕೊಳ್ಳಲು, ಮಳೆ ಬಿಸಿಲಿನಿಂದ ರಕ್ಷಣೆ ಪಡೆಯಲು ಬಸ್ ತಂಗುದಾಣಗಳನ್ನು ಬಸ್-ಬೇ ಗಳನ್ನು ನಿರ್ಮಿಸಲು ಕ್ರಮ ಜರುಗಿಸಲಾಗುವುದೇ?